ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ        ದಿನಾಂಕ : DATE : 10/04/2019

# ಮಂಡ್ಯ ಜಿಲ್ಲಾಧಿಕಾರಿ ದಿಢೀರ್ ಎತ್ತಂಗಡಿ

## ನಿಖಿಲ್ ನಾಮಪತ್ರ ಅಂಗೀಕಾರ ವಿವಾದದ ಬಿಸಿ | ನೂತನ ಡಿಸಿಯಾಗಿ ಪಿ.ಸಿ. ಜಾಫರ್

**ಮಂಡ್ಯ/ಬೆಂಗಳೂರು:** ಮಂಡ್ಯ ಲೋಕಸಭಾ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ನಾಮಪತ್ರ ಅಂಗೀಕಾರ ವಿವಾದದಲ್ಲಿ ಸಿಲುಕಿದ್ದ ಮಂಡ್ಯ ಜಿಲ್ಲಾಧಿಕಾರಿ ಎನ್.ಮಂಜುಶ್ರೀ ಅವರನ್ನು ಭಾರತ ಚುನಾವಣಾ ಆಯೋಗದ ನಿರ್ದೇಶನದನ್ವಯ ರಾಜ್ಯ ಸರಕಾರ ದಿಢೀರ್ ವರ್ಗಾವಣೆ ಮಾಡಿದೆ.



ವರ್ಗಾವಣೆಯಾದ ಮಂಡ್ಯ ಡಿಸಿ ಎನ್.ಮಂಜುಶ್ರೀ



ಮಂಡ್ಯ ನೂತನ ಜಿಲ್ಲಾಧಿಕಾರಿ ಪಿ.ಸಿ.ಜಾಫರ್

ಮಂಡ್ಯ ನೂತನ ಜಿಲ್ಲಾಧಿಕಾರಿಯಾಗಿ ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರಾಗಿದ್ದ ಐಎಎಸ್ ಅಧಿಕಾರಿ ಡಾ.ಪಿ.ಸಿ. ಜಾಫರ್ ಅವರನ್ನು ನೇಮಿಸಲಾಗಿದೆ. ಆದರೆ ಮಂಜುಶ್ರೀ ಅವರಿಗೆ ಯಾವುದೇ ಹುದ್ದೆ ತೋರಿಸಿಲ್ಲ. ನಿಖಿಲ್ ಕುಮಾರಸ್ವಾಮಿ ಅವರ ನಾಮಪತ್ರ ಹಲವು ಲೋಪಗಳಿಂದ ಕೂಡಿದ್ದರೂ ಅದನ್ನು ಅಂಗೀಕರಿಸಲಾಗಿದೆ ಎಂದು ಪಕ್ಷೇತರ ಅಭ್ಯರ್ಥಿ ಸುಮಲತಾ ಅಂಬರೀಷ್ ಅವರು ಚುನಾವಣಾ ಆಯೋಗಕ್ಕೆ ದೂರು ಸಲ್ಲಿಸಿದ್ದರು. ನಾಮಪತ್ರ ಪರಿಶೀಲನೆ ವೇಳೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದರೂ ಅದನ್ನು ಪರಿಗಣಿಸದೆ ಗೊಂದಲಮಯ ಮಾಡಿ ನಿಖಿಲ್ ನಾಮಪತ್ರ ಅಂಗೀಕರಿಸಿದ್ದರು. ಜತೆಗೆ ನಾಮಪತ್ರ ಪರಿಶೀಲನೆ . ವೇಳೆ ಮಾಡಿಕೊಂಡಿದ್ದ ವಿಡಿಯೊ ರೆಕಾರ್ಡ್ ಕೊಡಬೇಕೆಂಬ ಬೇಡಿಕೆಗೂ ಮಣಿಯದ ಜಿಲ್ಲಾಧಿಕಾರಿ ಮಂಜುಶ್ರೀ ಅವರು ಅರ್ಧ ವಿಡಿಯೊ ತುಣುಕು ಮಾತ್ರ ನೀಡಿದ್ದರು. ಜತೆಗೆ ವಿಡಿಯೊಗ್ರಾಫರ್ ವಿವಾಹ ಸಮಾರಂಭಕ್ಕೆ ಹೋಗಿದ್ದಾನೆಂದು ಹೇಳಿ ಕೈತೊಳೆದುಕೊಂಡಿದ್ದರು.

ಅಷ್ಟೇ ಅಲ್ಲ ಚುನಾವಣಾ ಕಣದಲ್ಲಿರುವ ಅಭ್ಯರ್ಥಿಗಳಿಗೆ ಕ್ರಮ ಸಂಖ್ಯೆ ನೀಡುವಲ್ಲಿಯೂ ತಾರತಮ್ಯ ಮಾಡಿದ್ದಾರೆಂದು ಬಿಎಸ್ಪಿ ಅಭ್ಯರ್ಥಿ ಕೂಡ ದೂರು ಸಲ್ಲಿಸಿದ್ದರು. ಜೆಡಿಎಸ್ ಅಭ್ಯರ್ಥಿ ನಿಖಿಲ್‌ಗೆ 1ನೇ ಕ್ರಮ ಸಂಖ್ಯೆ ನೀಡಿ ಸುಮಲತಾ ಅಂಬರೀಷ್‌ಗೆ 20ನೇ ಕ್ರಮ ಸಂಖ್ಯೆ ನೀಡುವಲ್ಲಿ ತಾರತಮ್ಯ ವೆಸಗಿದ್ದಾರೆಂಬ ಆರೋಪ ಕೇಳಿ ಬಂದಿತ್ತು. ನಾಮಪತ್ರ ಅಂಗೀಕಾರ ವಿವಾದ ಕುರಿತು ಮುಖ್ಯ ಚುನಾವಣಾಧಿಕಾರಿ ಸಂಜೀವ್ ಕುಮಾರ್ ಅವರು ಮಂಡ್ಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು. ಜತೆಗೆ ಪ್ರಾದೇಶಿಕ ಆಯುಕ್ತರಿಗೆ ವಿಚಾರಣೆ ನಡೆಸುವಂತೆ ಸೂಚಿಸಿದ್ದರು. ಪ್ರಾದೇಶಿಕ ಆಯುಕ್ತರು ಸುಮಲತಾ ಅಂಬರೀಷ್ ಅವರ ಚುನಾವಣಾ ಏಜೆಂಟ್ ಅವರನ್ನು ಕರೆಸಿ ವಿಚಾರಣೆ ನಡೆಸಿದ್ದರು. ಆ ಬಳಿಕ ಚುನಾವಣಾ ಆಯೋಗಕ್ಕೆ ವರದಿ ಸಲ್ಲಿಸಿದ್ದರು.

ತೆರವಾಗಿರುವ ಸ್ಥಾನಕ್ಕೆ ನೇಮಕಗೊಂಡಿರುವ ಡಾ.ಪಿ.ಸಿ.ಜಾಫರ್ ಈ ಹಿಂದೆಯೂ ಮಂಡ್ಯ ಡಿಸಿಯಾಗಿದ್ದರು.

**ಅಣ್ಣಾಮಲೈ ವೀಕ್ಷಕ**

ಈ ಮಧ್ಯೆ, ಮೇಲುಕೋಟೆ, ನಾಗಮಂಗಲ, ಕೃಷ್ಣರಾಜಪೇಟೆ, ಕೃಷ್ಣರಾಜನಗರ ವಿಧಾನಸಭಾ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಸಾಮಾನ್ಯ ವೀಕ್ಷಕರಾಗಿ ನೇಮಕಗೊಂಡಿದ್ದ ಐಎಎಸ್ ಅಧಿಕಾರಿ ರಂಜಿತ್ ಕುಮಾರ್ ಅವರನ್ನು ಎರಡು ದಿನಗಳ ಹಿಂದೆ ಬದಲಿಸಿ, ಐಪಿಎಸ್ ಅಧಿಕಾರಿ ಪಿ.ಅಣ್ಣಾಮಲೈ ಅವರನ್ನು ಭಾರತ ಚುನಾವಣಾ ಆಯೋಗದ ನೇಮಿಸಿತು.